ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂ: 080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-01.
ದಿನಾಂಕ: 13.12.2017

ಸಂಖ್ಯೆ:ಕಾಶಿಇ:ಶೈವಿ:162:ಸ್ವಚ್ಛತೆ:2017-18

# ಸುತ್ತೋಲೆ

ವಿಷಯ: ಕಾಲೇಜುಗಳಲ್ಲಿ 'ಸ್ವಚ್ಛ ಸರ್ವೇಕ್ಷಣ್ – 2018' ಕಾರ್ಯಕ್ರಮವನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕೋರಿಕೆ ಪತ್ರ ಸಂಖ್ಯೆ:ಜ.ಆ/ಆ & ಘತ್ಯಾನಿ/ಪಿಆರ್/1580/2017-18 ದಿನಾಂಕ:06.12.2017.

* * * * * * * *

ನಗರ ನೈರ್ಮಲ್ಯ ಸುಧಾರಿಸುವ ನಿಟ್ಟಿನಲ್ಲಿ ನಗರಗಳನ್ನು ಪ್ರೋತ್ಸಾಹಿಸುವ ದೃಷ್ಟಿಯಿಂದ ನಗರಾಭಿವೃದ್ಧಿ ಸಚಿವಾಲಯವು ಸ್ವಚ್ಛ ಭಾರತ ಅಭಿಯಾನದಡಿಯಲ್ಲಿ **ಸ್ವಚ್ಛ ಸರ್ವೇಕ್ಷಣ್ – 2018** ಅನ್ನು ಕೈಗೊಂಡಿರುತ್ತದೆ. ಈ ಹಿನ್ನಲೆಯಲ್ಲಿ ಕಾಲೇಜು ವಿದ್ಯಾರ್ಥಿಗಳಲ್ಲಿ ಸ್ವಚ್ಛತಾ ಪ್ರಜ್ಞೆಯನ್ನು ಜಾಗೃತಗೊಳಸುವ ಉದ್ದೇಶದಿಂದ ಕಾಲೇಜು ವಿದ್ಯಾರ್ಥಿಗಳಲ್ಲಿ **ಸ್ವಚ್ಛತೆಯ** ಬಗ್ಗೆ ಅರಿವು ಮೂಡಿಸುವುದು ಅವಶ್ಯಕವಾಗಿರುತ್ತದೆ.

ಈ ಸಂಬಂಧ, ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳಲ್ಲಿ ನಗರ ಸ್ವಚ್ಛತೆಯ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ಕಾಲೇಜುಗಳಲ್ಲಿ ಸ್ವಚ್ಛತಾ ಸಮಿತಿಗಳನ್ನು ರಚಿಸಿಕೊಂಡು, ಕಾಲೇಜು ಆವರಣ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು **ಸ್ವಚ್ಛ ಸರ್ವೇಕ್ಷಣ್** ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಕಾಲೇಜುಗಳಲ್ಲಿ ಸ್ವಚ್ಛತಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡ ಬಗ್ಗೆ ಮಾಹಿತಿಯನ್ನು ಆಯಾ ವಲಯದ ಪಾಲಿಕೆಯ ಜಂಟಿ ಆಯುಕ್ತರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು.
2. ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾ.ತಂ. ಅಧಿಕಾರಿ, ಕಾ.ಶಿ.ಆ. ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ಗೆ ಅಳವಡಿಸಲು.

**ಪ್ರತಿಯನ್ನು ಮಾಹಿತಿಗಾಗಿ:**

1) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಜಂಟಿ ಆಯುಕ್ತರು (ಆ & ಘತ್ಯಾನಿ) ರವರು ಕಛೇರಿ, 2ನೇ ಮಹಡಿ, ಅನೆಕ್ಸ್ ಕಟ್ಟಡ, ಕೇಂದ್ರ ಕಛೇರಿ, ಎನ್.ಆರ್.ರಸ್ತೆ, ಬೆಂಗಳೂರು – 560 002.

2) ಕಛೇರಿ ಪ್ರತಿ